ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ     ದಿನಾಂಕ : DATE : 21/09/2019

**ನಿಧನವಾರ್ತೆ**

### ಕಾ.ನಾ.ದಾಸಾಚಾರ್

ತುರುವೇಕೆರೆ: ತಾಲ್ಲೂಕಿನ ಮುನಿಯೂರು ಗ್ರಾಮದ ಮೂಡಲಪಾಯ ಯಕ್ಷಗಾನ ಕಲಾವಿದ ರಾಜ್ಯ ಪ್ರಶಸ್ತಿ ಪುರಸ್ಕೃತ ಕಾ.ನಾ. ದಾ ಸಾ ಚಾ ರ್ (71) ಶುಕ್ರವಾರ ನಿಧನರಾದರು.



ಕಾ.ನಾ ದಾಸಾಚಾರ್

ಅವರಿಗೆ ಪತ್ನಿ, ಒಬ್ಬ ಮಗ, ಇಬ್ಬರು ಹೆಣ್ಣು ಮಕ್ಕಳಿದ್ದಾರೆ.

ಮೂಡಲಪಾಯದ ಭಾಗವತರಾಗಿ ದೆಹಲಿ, ಧರ್ಮಸ್ಥಳ, ಶಿವಮೊಗ್ಗ, ಕಲಬುರ್ಗಿ, ಮೈಸೂರು ಸೇರಿದಂತೆ ಹಲವೆಡೆ ಪ್ರದರ್ಶನ ನೀಡಿದ್ದರು. ಆಕಾಶವಾಣಿ ಕಲಾವಿದರಾಗಿದ್ದರು. ಇವರ ಪ್ರಸಂಗಗಳು ಪ್ರತಿ ವರ್ಷ ಆಕಾಶವಾಣಿಯಲ್ಲಿ ಬಿತ್ತರವಾಗುತ್ತಿದ್ದವು.

ಸಾರ್ವಜನಿಕ ಅಸ್ಪತ್ರೆಯಲ್ಲಿ ಆರೋಗ್ಯ ಇನ್‌ಸ್ಪೆಕ್ಟರ್ ಆಗಿ ಕಾರ್ಯನಿರ್ವಹಿಸಿ ನಿವೃತ್ತರಾಗಿದ್ದರು. ದಾಸಾಚಾರ್ ಅವರ ಕಲಾಸೇವೆಗೆ ರಾಷ್ಟ್ರ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಿಂದಲೂ ನೂರಾರು ಪ್ರಶಸ್ತಿಗಳು ಸಂದಿವೆ.

ಅಂತ್ಯಕ್ರಿಯೆ ಮುನಿಯೂರಿನಲ್ಲಿ ಶುಕ್ರವಾರ ಸಂಜೆ ನಡೆಯಿತು.